ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯ ತಾಂತ್ರಿಕ ವರ್ಗದವರೂ ಸಹ ಕಾಮಗಾರಿಗಳ ಗುಣಮಟ್ಟ ಹಾಗೂ ಅಳತೆಗಳ ಬಗ್ಗೆ ದೃಢೀಕರಿಸುತ್ತಾರೆ. ಅಂತಿಮ ಬಿಲ್ಲುಗಳಿಗೆ ಸ್ಥಳೀಯ ಸಂಸ್ಥೆಗಳ ಉಸ್ತುವಾರಿ ಮತ್ತು ಸಹಿಯನ್ನು ಕಡ್ಡಾಯ ಮಾಡಲಾಗಿದೆ.

ಇ) ಈ ಕಾಮಗಾರಿಗಳನ್ನು ಮಾರ್ಚ್ 2003 ರ ಅಂತ್ಯದೊಳಗೆ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ.

**ತರೀಕೆರೆ ವ್ಯಾಪ್ತಿಯಲ್ಲಿ ಮೂರನೇ ಹಂತದ ಕುಡಿಯುವ ನೀರಿನ ಕಾಮಗಾರಿ ಪೂರ್ಣಗೊಳಿಸುವುದು**

2103 (2370) - ಶ್ರೀ ನೀಲಕಂಠಪ್ಪ ಬಿ.ಆರ್. (ತರೀಕೆರೆ): ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತರೀಕೆರೆ ಪುರಸಭೆಯ ವ್ಯಾಪ್ತಿಯಲ್ಲಿ ಸುಮಾರು 4 ಕೋಟಿ ರೂ.ಗಳ ಮೂರನೇ ಹಂತದ ಕುಡಿಯುವ ನೀರಿನ ಕಾಮಗಾರಿಯು ಕಳೆದ ಎರಡು ವರ್ಷಗಳ ಕಾಲದಿಂದ ಕಾರ್ಯ ವಿಳಂಬದಿಂದಾಗಿ ಜನಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ಈ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು):

ಅ) ಬಂದಿದೆ.

ಆ) ಫೆಬ್ರವರಿ 2003 ರ ಅಂತ್ಯದಲ್ಲಿ ಚಾಲ್ತಿಗೊಳಿಸಲಾಗುವುದು.

**ತರೀಕೆರೆ ತಾಲ್ಲೂಕಿಗೆ ವಾಣಿಜ್ಯ ತೆರಿಗೆ ಇಲಾಖೆ ಕಟ್ಟಡ ಪ್ರಾರಂಭಿಸುವುದು**

2104 (2372) - ಶ್ರೀ ಬಿ.ಆರ್. ನೀಲಕಂಠಪ್ಪ (ತರೀಕೆರೆ): ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತರೀಕೆರೆ ತಾಲ್ಲೂಕಿಗೆ ವಾಣಿಜ್ಯ ತೆರಿಗೆ ಇಲಾಖೆಯ ಕಟ್ಟಡವನ್ನು ಕಟ್ಟಲು ಮಂಜೂರಾತಿ ದೊರೆತಿದ್ದು, ಮತ್ತು ಸೂಕ್ತ ಸ್ಥಳಾವಕಾಶವನ್ನು ಒದಗಿಸಿದ್ದಾಗ್ಯೂ ಸಹ ಇಲ್ಲಿಯವರೆಗೆ ಕಾಮಗಾರಿಯನ್ನು ಪ್ರಾರಂಭಿಸದಿರಲು ಕಾರಣವೇನು? (ವಿವರ ನೀಡುವುದು)

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು):

ಅ) ಸರ್ಕಾರದ ಆದೇಶ ದಿನಾಂಕ:7-8-2002 ರ ಪ್ರಕಾರ ತರೀಕೆರೆಯಲ್ಲಿ ವಾಣಿಜ್ಯ ತೆರಿಗೆ ಕಛೇರಿಯ ಕಟ್ಟಡ ನಿರ್ಮಾಣಕ್ಕೆ ರೂ. 33.00 ಲಕ್ಷಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ನಂತರ ಲೋಕೋಪಯೋಗಿ ಇಲಾಖೆಯವರು ಅಂದಾಜು ಪಟ್ಟಿ ತಯಾರಿಸಿ ಅದಕ್ಕೆ ವಾಣಿಜ್ಯ ತೆರಿಗೆ ಆಯುಕ್ತರು ಮೇಲು ರುಜು ಮಾಡಿ ಅದನ್ನು ದಿನಾಂಕ: 23-12-2002 ರಂದು ಮುಖ್ಯ ಇಂಜಿನಿಯರ್ (ಸಂ ಮತ್ತು ಕ) (ದಕ್ಷಿಣ) ಬೆಂಗಳೂರು ಇವರಿಗೆ ಕಳುಹಿಸಿರುತ್ತಾರೆ.

ಸದ್ಯದಲ್ಲಿಯೇ ಕಾಮಗಾರಿ ಕೆಲಸ ಪ್ರಾರಂಭವಾಗುವುದು.

**ತರೀಕೆರೆಯಲ್ಲಿ ಅಗ್ನಿಶಾಮಕ ಠಾಣೆಯನ್ನು ಪ್ರಾರಂಭಿಸುವುದು**

2105 (2373) - ಶ್ರೀ ನೀಲಕಂಠಪ್ಪ, ಬಿ.ಆರ್. (ತರೀಕೆರೆ): ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು) ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?